# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 11 |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಮಂಜುನಾಥ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 12.09.2022 |
| ಉತ್ತರಿಸುವ ಸಚಿವರು | : | ಮುಖ್ಯಮಂತ್ರಿ. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಪ್ರಸ್ತುತ ರಾಜ್ಯದಲ್ಲಿ ಪಡಿತರ ಚೀಟಿಗೆ ಸಂಬಂಧಿಸಿದ ಸಾರ್ವಜನಿಕರ ಕೆಲಸಗಳನ್ನು ಸರ್ಕಾರ ನಿರ್ವಹಿಸುತ್ತಿದೆಯೇ; (ವಿವರ ನೀಡುವುದು) | ಹೌದು.<br>ಸರ್ಕಾರವು ಸಾರ್ವಜನಿಕರಿಗೆ ಹೊಸ ಪಡಿತರ ಚೀಟಿ ವಿತರಣೆ ಕಾರ್ಯ ಹಾಗೂ ಪಡಿತರ ಚೀಟಿಯಲ್ಲಿ ತಿದ್ದುಪಡಿ ಕಾರ್ಯ, ಹೆಸರು ಸೇರಿಸುವುದು, ಹೆಸರು ತೆಗೆಯುವುದು, ಇ-ಕೆವೈಸಿ ಮಾಡಿಸುವುದು, ಪಡಿತರ ಚೀಟಿಯ ವರ್ಗಾವಣೆ, ಆಧಾರ್ ಸಂಖ್ಯೆ ಜೋಡಣೆ, ಆಧಾರ್ ಬಯೋ ದೃಢೀಕರಣ, ಬದಲಿ ಪಡಿತರ ಚೀಟಿ ವಿತರಣೆ ಹಾಗೂ ಈಗಾಗಲೇ ವಿತರಿಸಿರುವ ಪಡಿತರ ಚೀಟಿಗಳಿಗೆ (ಅಂತ್ಯೋದಯ ಅನ್ನ, ಆದ್ಯತಾ ಮತ್ತು ಆದ್ಯತೇತರ ಪಡಿತರ ಚೀಟಿಗಳು) ಸರ್ಕಾರದ ಹಂಚಿಕೆಯನ್ವಯ ಪ್ರತಿ ಮಾಹೆ ಪಡಿತರ ಚೀಟಿದಾರರಿಗೆ ಪಡಿತರ ವಿತರಣೆ ಮಾಡುವ ಮಹತ್ತರವಾದ ಕೆಲಸವನ್ನು ನಿರ್ವಹಿಸಲಾಗುತ್ತಿದೆ. |
| ಆ | ಸರ್ಕಾರದ ಹಲವು ಸವಲತ್ತುಗಳಿಗೆ ಪಡಿತರ ಚೀಟಿ ಅಗತ್ಯವಿದ್ದು ಪಡಿತರ ಚೀಟಿಯ ಅಲಭ್ಯತೆಯಿಂದಾಗಿ ಸಾರ್ಜನಿಕರು ಹಲವು ಸೇವೆಯಿಂದ ವಂಚಿತರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ನೀಡುವುದು) | ಹೊಸ ಆದ್ಯತಾ ಪಡಿತರ ಚೀಟಿ ಕೋರಿ ಸಲ್ಲಿಸಿರುವ ಅರ್ಜಿಗಳ ಅರ್ಹತೆ ಗೆ ಸಂಬಂಧಿಸಿದಂತೆ ಪರಿಶೀಲನಾ ಕಾರ್ಯ ಪ್ರಗತಿಯಲ್ಲಿದೆ. |
| ಇ | ಸರ್ವರ್ /ಆಡಳಿತಾತ್ಮಕ ಸಮಸ್ಯೆಯಿಂದಾಗಿ ಸಾರ್ವಜನಿಕರ ಪಡಿತರ ಚೀಟಿಗೆ ಸಂಬಂಧಿಸಿದ ಕೆಲಸಗಳು ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಈ | ಈ ಸಮಸ್ಯೆಯನ್ನು ಪರಿಹರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ಸಂಪೂರ್ಣ ಮಾಹಿತಿ ನೀಡುವುದು) | ಯಾವುದೇ ನ್ಯಾಯಬೆಲೆ ಅಂಗಡಿಗಳಲ್ಲಿ ಪಡಿತರ ವಿತರಿಸುವಾಗ ಬಯೋ ದೃಢೀಕರಣ ಸಮಸ್ಯೆ ಎದುರಾದರೆ ಅಂಥ ಪಡಿತರ ಚೀಟಿದಾರರಿಗೆ ಮೊಬೈಲ್ ಓ.ಟಿ.ಪಿ ಅಥವಾ ಬಯೋ ವಿನಾಯ್ತಿ ಅಥವಾ ಕೈ ಬಿಲ್ಲಿನಲ್ಲೂ ಪಡಿತರ ವಿತರಿಸಲು ಅವಕಾಶಗಳನ್ನು ಕಲ್ಪಿಸಲಾಗಿದೆ. ತಿಂಗಳ ಕೊನೆಯ ದಿನಗಳಲ್ಲಿ ಎಲ್ಲಾ ನ್ಯಾಯಬೆಲೆ ಅಂಗಡಿಗಳು ಏಕ ಕಾಲಕ್ಕೆ ಕಾರ್ಯಾಚರಣೆ ಆರಂಭಿಸಿದಾಗ ಸರ್ವರ್ ಮೇಲೆ ಹೆಚ್ಚಿನ ಒತ್ತಡ ಉಂಟಾಗಿ ನ್ಯಾಯಬೆಲೆ ಅಂಗಡಿಗಳಲ್ಲಿ ವಿತರಣೆ ವಹಿವಾಟು ನಿಧಾನವಾಗುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆ. ಇಂಥ ವಿಷಯವು ತಾತ್ಕಾಲಿಕವಾಗಿದ್ದು ತಕ್ಷಣವೇ ಬಗೆಹರಿಸಿ ಪಡಿತರ ವಿತರಿಸಲು ಕ್ರಮ ವಹಿಸಲಾಗುತ್ತಿದೆ. |

| | | |
|---|---|---|
| | | ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ದತ್ತಾಂಶ ಕೇಂದ್ರವನ್ನು ರಾಜ್ಯ ದತ್ತಾಂಶ ಕೇಂದ್ರಕ್ಕೆ (ಕೆ.ಎಸ್.ಡಿ.ಸಿ) ವರ್ಗಾಯಿಸಲು ಕ್ರಮ ಕೈಗೊಳ್ಳಲಾಗಿದ್ದು, ನ್ಯಾಯಬೆಲೆ ಅಂಗಡಿಗಳಲ್ಲಿ ಪಡಿತರ ವಿತರಣೆಗೆ ಸಂಬಂಧಿಸಿದಂತೆ ಸರ್ವರ್ ಅಥವಾ ಇತರೆ ತಾಂತ್ರಿಕ ಸಮಸ್ಯೆಗಳನ್ನು ಪರಿಹರಿಸಲು ಸಾಧ್ಯವಾಗುತ್ತದೆ. |

**ಆನಾಸ 148 ಡಿಆರ್ಎ 2022 (ಇ-ಆಫೀಸ್)**

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ